**ಆಕಾಶವಾಣಿ**
**ಪ್ರದೇಶ ಸಮಾಚಾರ**
**ಓದುತ್ತಿರುವವರು ರವಿ ಕುಲಕರ್ಣಿ 14-3-26**

**ಮುಖ್ಯಾಂಶಗಳು**

- **ಜನಕಲ್ಯಾಣದ ಹಾದಿಯಲ್ಲಿ,** ಗ್ಯಾರಂಟಿ ಯೋಜನೆಗಳು ಸರ್ಕಾರದ ಪ್ರಮುಖ ಹೆಜ್ಜೆಗಳು–ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ.
- **ವಿಸ್ತೃತ ಯೋಜನಾ ವರದಿ** ಪೂರ್ಣಗೊಂಡ ನಂತರ ಬಳ್ಳಾರಿ ವಿಮಾನ ನಿಲ್ದಾಣ ಸ್ಥಾಪನೆಗೆ ಕ್ರಮ– ಸಚಿವ ಎಂ.ಬಿ.ಪಾಟೀಲ್‌ರಿಂದ ಮಾಹಿತಿ.
- **ಆದ್ಯತೆಯ ಮೇರೆಗೆ, ಆಸ್ಪತ್ರೆ–ವಿದ್ಯಾರ್ಥಿನಿಲಯಗಳಿಗೆ** ವಾಣಿಜ್ಯ ಬಳಕೆಯ ಅನಿಲ ಸಿಲಿಂಡರ್ ಪೂರೈಕೆ– ಸಚಿವ ಕೆ.ಎಚ್.ಮುನಿಯಪ್ಪ ಭರವಸೆ.
- **ಧಾರವಾಡದಲ್ಲಿ ನಿರ್ಮಾಣಗೊಂಡಿರುವ** ಸುಸಜ್ಜಿತ ಕ್ರೀಡಾ ಸಂಕೀರ್ಣ ಹಾಗೂ ಅಂತಾರಾಷ್ಟ್ರೀಯ ದರ್ಜೆಯ ಈಜುಗೊಳ ಇಂದು ಲೋಕಾರ್ಪಣೆ.

**ಈಗ ವಾರ್ತೆಗಳ ವಿವರ**

*******

**ರಾಜ್ಯದ ಬಡವರು ಮತ್ತು ಶೋಷಿತ** ವರ್ಗದವರಿಗಾಗಿ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳು ಜನಕಲ್ಯಾಣದ ಹಾದಿಯಲ್ಲಿ ಸರ್ಕಾರದ ಪ್ರಮುಖ ಹೆಜ್ಜೆಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ವರುಣಾ ವಿಧಾನಸಭಾ ಕ್ಷೇತ್ರದ ಗಡಿ ಗುರುಮಠದಲ್ಲಿ ನಡೆದ ಶ್ರೀ ಬೀರೇಶ್ವರಸ್ವಾಮಿ ದೇವಸ್ಥಾನದ ಸಂಪ್ರೋಕ್ಷಣ ಪುನರ್ ಪ್ರತಿ ಷ್ಠಾಪನೆ ಹಾಗೂ ಮಹಾದ್ವಾರ ಪೂಜಾ ಮಹೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಲ್ಲಾ ಧರ್ಮಗಳು ಪ್ರೀತಿ ಮತ್ತು ಸಹಾನುಭೂತಿಯನ್ನೇ ಬೋಧಿಸುತ್ತವೆ. ಭಕ್ತರು ಧರ್ಮದ ನೈಜ ಮೌಲ್ಯಗಳನ್ನು ಪಾಲಿಸಬೇಕು ಎಂದರು. ತಮ್ಮ ಸುದೀರ್ಘ ರಾಜಕೀಯ ಪಯಣದಲ್ಲಿ 13 ಬಾರಿ ಚುನಾವಣೆ ಎದುರಿಸಿದ್ದು, ಸೋಲುಂಡಾಗಲೂ ಜನರ ಪ್ರೀತಿ ಮತ್ತು ಬೆಂಬಲ ಕುಂದಿಲ್ಲ. ಕೊನೆಯ ಉಸಿರಿರುವವರೆಗೂ ಜನರ ಸೇವೆಯಲ್ಲೇ ತೊಡಗಿರುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದರು.

*******

**ವಿಸ್ತೃತ ಯೋಜನಾ ವರದಿ** ಪೂರ್ಣಗೊಂಡ ನಂತರ ಬಳ್ಳಾರಿ ವಿಮಾನ ನಿಲ್ದಾಣ ಸ್ಥಾಪನೆ ಕುರಿತು ಪರಿಶೀಲಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಜನಾರ್ಧನರೆಡ್ಡಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿಸ್ತೃತ ಯೋಜನೆಗಾಗಿ ಸಮಾಲೋಚಕರನ್ನು ನೇಮಿಸುವ ಹಂತದಲ್ಲಿದ್ದು, ಈ ಹಿಂದೆ ವಿಮಾನ ನಿಲ್ದಾಣವನ್ನು ಪಿಪಿಪಿ ಮಾದರಿಯಡಿ ಅಭಿವೃದ್ಧಿಪಡಿಸಲು ಅನುಮೋದಿಸಲಾಗಿತ್ತು. ಯೋಜನಾ ಪ್ರವರ್ತಕರು ಯಾವುದೇ ಕಾಮಗಾರಿಗಳನ್ನು ಪ್ರಾರಂಭಿಸದೆ ಇದ್ದುದರಿಂದ ಸದರಿ ಸಂಸ್ಥೆಯೊಂದಿಗಿನ ಒಪ್ಪಂದವನ್ನು ರದ್ದುಗೊಳಿಸಿ EPC ಅಂದರೆ Engineering Procurement and Construction ಮಾದರಿಯಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸಲು ಆದೇಶಿಸಲಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ ತಿಳಿಸಿದರು.

*******

**ರಾಜ್ಯದಲ್ಲಿ ಹಂತ ಹಂತವಾಗಿ** ತೋಟಗಾರಿಕಾ ಮಹಾವಿದ್ಯಾಲಯಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಹೊಸ ತೋಟಗಾರಿಕೆ ಮಹಾವಿದ್ಯಾಲಯಗಳನ್ನು ಸ್ಥಾಪನೆಯ ಸಾಧಕ–ಬಾಧಕಗಳನ್ನು ಪರಿಶೀಲಿಸಲು ತೋಟಗಾರಿಕೆ ವಿಜ್ಞಾನಿಗಳ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ವಿವಿಧ ಆಯಾಮಗಳನ್ನು ಪರಿಶೀಲಿಸಿರುವ ಸಮಿತಿ, ತಿಪಟೂರು ತಾಲ್ಲೂಕಿನ ಬಿದರೆಗುಡಿಕಾವಲಿ ಸೇರಿದಂತೆ ರಾಜ್ಯದ ವಿವಿಧ ಸ್ಥಳಗಳಲ್ಲಿ ತೋಟಗಾರಿಕೆ ಮಹಾವಿದ್ಯಾಲಯಗಳನ್ನು ಸ್ಥಾಪಿಸುವ ಬಗ್ಗೆ ವರದಿ ನೀಡಿದೆ. ಸದರಿ ವರದಿಯ ಆಧಾರದ ಮೇಲೆ ಮಹಾವಿದ್ಯಾಲಯಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ಹೇಳಿದರು.

*******

**ಇ–ಆಸ್ತಿ ತಂತ್ರಾಂಶದಲ್ಲಿ** ಉಂಟಾಗುವ ತಾಂತ್ರಿಕ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಲಾಗುತ್ತಿದೆ ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್.ಸುರೇಶ್ ಹೇಳಿದ್ದಾರೆ. ಇ–ತಂತ್ರಾಂಶದಲ್ಲಿನ ಲೋಪದೋ ಷಗಳನ್ನು ಸರಿಪಡಿಸಿ ಆಸ್ತಿಯ ಮಾಲೀಕರುಗಳಿಗೆ ಇ–ಸ್ವತ್ತು ಖಾತೆ ಮಾಡಿಕೊಡುವಂತೆ ವಿಧಾನಸಭೆಯಲ್ಲಿ ತುಮಕೂರು ಶಾಸಕ ಜ್ಯೋತಿ ಗಣೇಶ್ ಜಿ.ಬಿ ಅವರ ಕೋರಿಕೆಗೆ ಪ್ರತಿಕ್ರಿಯಿಸಿದ ಸಚಿವರು, ಸ್ವತ್ತಿನ ಮಾಲೀಕರು ಇ–ಖಾತಾ ಕೋರಿ ಕರ್ನಾಟಕ–ಒನ್ ಹಾಗೂ ಸಿಟಿಜನ್ ಪೋರ್ಟಲ್ ಮೂಲಕ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು.

*******

**ಆದ್ಯತೆ ಮೇರೆಗೆ ಆಸ್ಪತ್ರೆ–ವಿದ್ಯಾರ್ಥಿನಿಲಯಗಳಿಗೆ** ವಾಣಿಜ್ಯ ಬಳಕೆಯ ಅನಿಲ ಸಿಲಿಂಡರ್ ಒದಗಿಸಲಾಗುವುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ವಿಧಾನಪರಿ ಷತ್‌ನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಸದ್ಯ ವಾಣಿಜ್ಯ ಬಳಕೆ ಅನಿಲ ಸಿಲಿಂಡರ್ ಪೂರೈಕೆಯ ಸಮಸ್ಯೆಯಿದ್ದು, ಒಂದು

ವಾರದೊಳಗೆ ಬಗೆಹರಿಯಲಿದೆ. ಸಂಬಂಧಪಟ್ಟ ತೈಲ ಕಂಪನಿಗಳು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿ ಸಲಹೆ ಸೂಚನೆಗಳನ್ನು ನೀಡಲಾಗಿದೆ. ಅಲ್ಲಿಯವರೆಗೆ ಹೋಟೆಲ್ ಮಾಲೀಕರು ಸಹಕರಿಸಬೇಕು ಎಂದರು. ಈಗಾಗಲೇ ಎರಡು ಹಡಗುಗಳು ಬಂದಿದ್ದು, ಇನ್ನು 10 ಹಡಗುಗಳು ಬರುತ್ತಿವೆ. ಅನಿಲ ಸಿಲಿಂಡರ್‌ಗಳು ಕಾಳಸಂತೆಯಲ್ಲಿ ಮಾರಾಟವಾಗದಂತೆ ಎಚ್ಚರವಹಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದರು.

*******

**ಗೃಹಬಳಕೆಯ ಸಿಲಿಂಡರ್** ಅಥವಾ ಸಣ್ಣ ಸಿಲಿಂಡರ್‌ಗಳನ್ನು ಹೆಚ್ಚಿನ ದರಕ್ಕೆ ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಎಚ್ಚರಿಕೆ ನೀಡಿದ್ದಾರೆ. ಧಾರವಾಡದಲ್ಲಿ ನಡೆದ ಎಲ್‌ಪಿಜಿ ವಿತರಕರ, ಹೋಟೆಲ್ ಮಾಲೀಕರ ಮತ್ತು ಸಿಲಿಂಡರ್ ಏಜೆನ್ಸಿಗಳ ಪ್ರತಿನಿಧಿಗಳ ಸಭೆಯಲ್ಲಿ ಈ ಎಚ್ಚರಿಕೆ ನೀಡಿದ ಅವರು, ಗೃಹಬಳಕೆ ಗ್ರಾಹಕರಿಗೆ ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ. ಗೃಹಬಳಕೆ ಸಿಲಿಂಡರ್ ಬುಕ್ ಮಾಡಲು ನಗರ ಪ್ರದೇಶದ ಗ್ರಾಹಕರಿಗೆ 25 ದಿನ ಮತ್ತು ಗ್ರಾಮೀಣ ಭಾಗದ ಗ್ರಾಹಕರಿಗೆ 45 ದಿನಗಳ ಅವಕಾಶವಿದೆ. ಯಾರು ಕೂಡಾ ವದಂತಿಗಳಿಗೆ ಒಳಗಾಗಿ ಅವಸರ ಪಡದೇ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು

*******

**ಕೇಂದ್ರ ಸರ್ಕಾರದ ಪ್ರಸಾದ್ 2.0** ಯೋಜನೆಯಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಸಿದ್ಧ ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ 184 ಕೋಟಿ ಮೊತ್ತದ ಯೋಜನೆಗೆ ಶೀಘ್ರವೇ ಅನುಮೋದನೆ ದೊರೆಯಲಿದೆ ಎಂದು ಸಂಸದ ಡಾ.ಕೆ. ಸುಧಾಕರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರನ್ನು ಭೇಟಿ ಮಾಡಿ, ದೇವಾಲಯದ ಸಮಗ್ರ ಅಭಿವೃದ್ಧಿ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ. ಕಳೆದ ಡಿಸೆಂಬರ್‌ನಲ್ಲಿ ಸಲ್ಲಿಸಲಾದ 184 ಕೋಟಿ ಮೊತ್ತದ ಪ್ರಸ್ತಾವನೆಗೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಮುಂದಿನ ಒಂದು ತಿಂಗಳೊಳಗೆ ಅನುಮೋದನೆ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ಸಂಸದರು ಮಾಹಿತಿ ನೀಡಿದ್ದಾರೆ.

*******

**ವಿವಿಧ ಕಂಪೆನಿಗಳ ಸಾಮಾಜಿಕ** ಹೊಣೆಗಾರಿಕೆ ನಿಧಿ–ಸಿಎಸ್‌ಆರ್ ಅಡಿ ಧಾರವಾಡದಲ್ಲಿ ನಿರ್ಮಾಣಗೊಂಡಿರುವ ಸುಸಜ್ಜಿತ ಕ್ರೀಡಾ ಸಂಕೀರ್ಣ ಹಾಗೂ ಅಂತಾರಾಷ್ಟ್ರೀಯ ದರ್ಜೆಯ ಈಜುಗೊಳ ಇಂದು ಲೋಕಾರ್ಪಣೆಗೊಳ್ಳಲಿದ್ದು, ಕೇಂದ್ರ ಯುವಜನ ವ್ಯವಹಾರ ಹಾಗೂ ಕ್ರೀಡಾ ಖಾತೆ ಸಚಿವ ಮನ್ಸೂಖ ಮಾಂಡವೀಯ ಉದ್ಘಾಟಿಸಲಿದ್ದಾರೆ. ಕ್ರೀಡಾ ಸಂಕೀರ್ಣ ಮತ್ತು ಈಜುಗೊಳದ ವಿಶೇಷತೆ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಧಾರವಾಡ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸದಾನಂದ ಅಮಲಾಪುರ ಅವರು….

*******

**ಹಾಸನ ಕೈಗಾರಿಕಾ ಪ್ರದೇಶದಲ್ಲಿ** 810 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಅತ್ಯಾಧುನಿಕ ಮೆಗಾಡೇರಿ ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಲಾಗುವುದು ಎಂದು ಹಾಸನ ಹಾಲು ಒಕ್ಕೂಟದ ಅಧ್ಯಕ್ಷ ಎಚ್ ಡಿ ರೇವಣ್ಣ ಹೇಳಿದ್ದಾರೆ. ಹಾಸನ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವಿಶೇ ' ಸಾಮಾನ್ಯ ಸಭೆಯಲ್ಲಿ ಈ ವಿಷಯ ತಿಳಿಸಿದ ಅವರು, ಮೆಗಾಡೇರಿ ಕಾಮಗಾರಿ 2017–18 ರಲ್ಲಿ ಆರಂಭಗೊಂಡಿದ್ದು, ಈಗ ಬಹುತೇಕ ಮುಕ್ತಾಯ ಹಂತಕ್ಕೆ ಬಂದಿದೆ. ದಿನಕ್ಕೆ 10 ಲಕ್ಷ ಲೀಟರ್ ಹಾಲು ಸಂಸ್ಕರಣೆ ಮಾಡಬಹುದು. ಮುಂದೆ 15 ಲಕ್ಷ ಲೀಟರ್‌ಗೆ ಹೆಚ್ಚಿಸಬಹುದಾಗಿದೆ ಎಂದರು. ಪ್ರತಿದಿನ 2 ಲಕ್ಷ ಲೀಟರ್ ಹಾಲು ಪ್ಯಾಕಿಂಗ್, 1 ಲಕ್ಷ ಲೀಟರ್ ಮೊಸರು ತಯಾರಿಕೆ, 40 ಟನ್ ಬೆಣ್ಣೆ ತಯಾರಿಕೆ, 10 ಟನ್ ತುಪ್ಪ ತಯಾರಿಸುವ ಸಾಮರ್ಥ್ಯ ಹೊಂದಿದೆ ಎಂದು ರೇವಣ್ಣ ಹೇಳಿದರು.

*******

**ರಾಮನಗರ ಜಿಲ್ಲೆಯ** ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮಹಿಳಾ ಸ್ನೇಹಿ ಶೌಚಾಲಯ ಹಾಗೂ ವಿಶ್ರಾಂತಿ ಕೊಠಡಿಗಳ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರ ಆರೋಗ್ಯದ ಹಿತದೃಷ್ಠಿಯಿಂದ, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಮಹಿಳಾ ಸ್ನೇಹಿ ಶೌಚಾಲಯ ಹಾಗೂ ವಿಶ್ರಾಂತಿ ಕೊಠಡಿಗಳ ವ್ಯವಸ್ಥೆ ಕಲ್ಪಿಸಲಾಗುವುದು. ಎನ್.ಆರ್.ಎಲ್.ಎಂ.–ಸಂಜೀವಿನಿ ಯೋಜನೆಯಡಿ ರೂಪುಗೊಂಡಿರುವ ಸ್ವಸಹಾಯ ಗುಂಪುಗಳ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಮುಂದಿನ ದಿನಗಳಲ್ಲಿ ಕೊಠಡಿ ಕಲ್ಪಿಸಲಾಗುವುದು ಎಂದು ಅವರು ಹೇಳಿದರು.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಜನಕಲ್ಯಾಣದ ಹಾದಿಯಲ್ಲಿ,** ಗ್ಯಾರಂಟಿ ಯೋಜನೆಗಳು ಸರ್ಕಾರದ ಪ್ರಮುಖ ಹೆಜ್ಜೆಗಳು–ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ.

**ವಿಸ್ತೃತ ಯೋಜನಾ ವರದಿ** ಪೂರ್ಣಗೊಂಡ ನಂತರ ಬಳ್ಳಾರಿ ವಿಮಾನ ನಿಲ್ದಾಣ ಸ್ಥಾಪನೆಗೆ ಕ್ರಮ– ಸಚಿವ ಎಂ.ಬಿ.ಪಾಟೀಲ್‌ರಿಂದ ಮಾಹಿತಿ

**ಆದ್ಯತೆಯ ಮೇರೆಗೆ, ಆಸ್ಪತ್ರೆ**–ವಿದ್ಯಾರ್ಥಿನಿಲಯಗಳಿಗೆ ವಾಣಿಜ್ಯ ಬಳಕೆಯ ಅನಿಲ ಸಿಲಿಂಡರ್ ಪೂರೈಕೆ– ಸಚಿವ ಕೆ.ಎಚ್.ಮುನಿಯಪ್ಪ ಭರವಸೆ.

**ಧಾರವಾಡದಲ್ಲಿ ನಿರ್ಮಾಣಗೊಂಡಿರುವ** ಸುಸಜ್ಜಿತ ಕ್ರೀಡಾ ಸಂಕೀರ್ಣ ಹಾಗೂ ಅಂತಾರಾಷ್ಟ್ರೀಯ ದರ್ಜೆಯ ಈಜುಗೊಳ ಇಂದು ಲೋಕಾರ್ಪಣೆ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******